ಪ್ರ-330 (23)

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಮರಿತಿಬ್ಬೇಗೌಡ ಮತ್ತು ಶ್ರೀ ಪುಟ್ಟಣ್ಣ ಇವರುಗಳ ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.

## ವಿಷಯ

ಖಾಸಗಿ ಅನುದಾನಿತ/ಅನುದಾನರಹಿತ ಶಾಲೆಗಳ ಮಾನ್ಯತೆ ನವೀಕರಣದ ಸಂಬಂಧ ಇಲಾಖೆ ರೂಪಿಸಿರುವ ನಿಯಮಾವಳಿಗಳ ಕುರಿತು.

## ಉತ್ತರ

ಕರ್ನಾಟಕ ಶಿಕ್ಷಣ ಕಾಯಿದೆ-1983ಕ್ಕೆ ಸೆಕ್ಷನ್-5(ಎ) ರಡಿಯಲ್ಲಿ ಸುರಕ್ಷತಾ ನಿಯಮಗಳನ್ನು ಸೇರ್ಪಡೆ ಮಾಡಲಾಗಿರುತ್ತದೆ. (ಸರ್ಕಾರಿ ಅಧಿಸೂಚನೆ ಸಂಖ್ಯೆ:ಇಡಿ.709.ಪಿಜಿಸಿ.2017, ದಿನಾಂಕ:07-03-2018) ಈ ಅಧಿನಿಯಮದಂತೆ ಎಲ್ಲಾ ಶಾಲೆಗಳು ಅಂದರೆ, 2018ಕ್ಕಿಂತ ಪೂರ್ವ ಮತ್ತು ನಂತರದಲ್ಲಿ ಪ್ರಾರಂಭವಾದ ಶಾಲೆಗಳು ಕಡ್ಡಾಯವಾಗಿ ಒಂದು ವರ್ಷದ ಒಳಗೆ ಎಲ್ಲಾ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಳ್ಳಲು ಅವಕಾಶವನ್ನು ನೀಡಿ ಕಡ್ಡಾಯಗೊಳಿಸಲಾಗಿದೆ. ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಛ ನ್ಯಾಯಾಲಯಕ್ಕೆ ದಾವೆ ಸಂಖ್ಯೆ: 483/2004ರಲ್ಲಿ ಸಲ್ಲಿಸಿರುವ ಮುಚ್ಚಳಿಕೆ ಪ್ರಮಾಣ ಪತ್ರದಂತೆ ಹಾಗೂ ಮಾನ್ಯ ಸರ್ವೋಚ್ಛ ನ್ಯಾಯಾಲಯವು 2016ರಲ್ಲಿ ನೀಡಿರುವ ಅಂತಿಮ ಆದೇಶದಂತೆ ಕೇಂದ್ರ ಸರ್ಕಾರವು ಎನ್.ಡಿ.ಎಂ.ಎ. ಕಾಯ್ದೆಯಡಿಯಲ್ಲಿ ಶಾಲಾ ಸುರಕ್ಷತಾ ಪಾಲಿಸಿ ಎಂಬುದಾಗಿ ಅಧಿನಿಯಮವನ್ನು ಜಾರಿಗೆ ತಂದಿರುತ್ತದೆ.

ಕೇಂದ್ರದ ಅಧಿನಿಯಮದಂತೆ ರಾಜ್ಯದಲ್ಲಿ ಕರ್ನಾಟಕ ಶಿಕ್ಷಣ ಅಧಿನಿಯಮ 1983ನ್ನು ಜಾರಿಗೆ ತರುವಾಗ ಸದರಿ ಅಧಿನಿಯಮದ ಕರಡನ್ನು ಸಾರ್ವಜನಿಕರಿಗೆ ಬಿಡುಗಡೆ ಮಾಡಿ ಆಕ್ಷೇಪಣೆ ಸಲ್ಲಿಸಲು ಸಾಕಷ್ಟು ಕಾಲಾವಕಾಶ ನೀಡಲಾಗಿರುತ್ತದೆ. ಅದರಂತೆ, ಸಲ್ಲಿಕೆಯಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ಸಭೆಗಳಲ್ಲಿ ಚರ್ಚಿಸಿ ಕರ್ನಾಟಕ ವಿಧಾನಮಂಡಲದ ಅಧಿವೇಶನದಲ್ಲಿ ಸದರಿ ಅಧಿನಿಯಮವನ್ನು ಮಂಡಿಸಿ ವಿಧಾನಮಂಡಲಗಳ ಅನುಮೋದನೆಯನ್ನು ಪಡೆದು ಜಾರಿಗೆ ತರಲಾಗಿರುತ್ತದೆ.

ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡಿರುವ ಆದೇಶ ಹಾಗೂ ಸರ್ಕಾರವು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುವ ಮುಚ್ಚಳಿಕೆ ಪ್ರಮಾಣ ಪತ್ರದಂತೆ (ಅಫಿಡ್‌ವಿಟ್) ಹೊರಡಿಸಲಾದ ಸರ್ಕಾರದ ಸುತ್ತೋಲೆ ಸಂಖ್ಯೆ:

ಇಪಿ.46.ಎಸ್.ಹೆಚ್.ಹೆಚ್.2020, ದಿನಾಂಕ:10-11-2020 ರಂತೆ ಎಲ್ಲಾ ಶಾಲೆಗಳು ಕಡ್ಡಾಯವಾಗಿ ಕಟ್ಟಡ ಮತ್ತು ಅಗ್ನಿ ಸುರಕ್ಷತಾ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಪ್ರಾಧಿಕಾರದಿಂದ ಪಡೆಯುವುದು ಕಡ್ಡಾಯವಾಗಿರುತ್ತದೆ. ಈ ಕುರಿತು ಶಿಕ್ಷಣ ಸಂಸ್ಥೆಗಳ ಸಂಘಟನೆಗಳು ಹಾಗೂ ಆಡಳಿತ ಮಂಡಳಿಗಳ ಜೊತೆಯಲ್ಲಿ ಸಭೆ ನಡೆಸಿ, ಸದರಿ ನಿಯಮಾವಳಿಗಳ ಬಗ್ಗೆ ಕೂಲಂಕಷವಾಗಿ ಚರ್ಚಿಸಿ, ಆಡಳಿತ ಮಂಡಳಿಗಳಿಗೆ ಹಾಗೂ ಸಂಘಟನೆಗಳಿಗೆ ಎಲ್ಲಾ ಶಾಲೆಗಳು ಕಡ್ಡಾಯವಾಗಿ ಪ್ರಮಾಣ ಪತ್ರಗಳನ್ನು ಸಲ್ಲಿಸುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ದಿನಾಂಕ:02.12.2021ರಲ್ಲಿ ಸೂಚಿಸಲಾಗಿತ್ತದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಲ್ಲಿಯು ಹಾಲಿ ನಡೆಯುತ್ತಿರುವ ಶಾಲೆಗಳೂ ಸಹ ಸುರಕ್ಷತಾ ನಿಯಮಗಳನ್ನು ಪಾಲಿಸುವಂತೆ ತಿಳಿಸಲಾಗಿರುವುದರಿಂದ 2018ಕ್ಕಿಂತ ಪೂರ್ವದಲ್ಲಿ ಅಥವಾ 2018ರ ನಂತರ ಪ್ರಾರಂಭವಾದ ಶಾಲೆಗಳಿಗೆ ಯಾವುದೇ ರೀತಿ ವಿನಾಯಿತಿ ಇರುವುದಿಲ್ಲ. ಈ ಬಗ್ಗೆ ಆನ್‌ಲೈನ್ ಮೂಲಕ ಮಾನ್ಯತೆ ನವೀಕರಣವನ್ನು ನಿರ್ವಹಿಸಲು ನಿಯಮಗಳಲ್ಲಿ ತಿಳಿಸಲಾಗಿದ್ದು. ಅದರಂತೆ, ನಿಯಮಗಳನ್ನು ರೂಪಿಸಿ ಆನ್ ಲೈನ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ ಬಿಡುಗಡೆಗೊಳಿಸಲಾಗಿದೆ.

**ಇಪಿ 400 ಪಿಜಿಸಿ 2021**

(ಬಿ.ಸಿ. ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ

ಸಕಾಲ ಸಚಿವರು.